ಎನ್.ಆರ್.ಇ.ಜಿ.ಎ. ಯೋಜನೆ

710 (1098) ಶ್ರೀ ಕಾಕಾಸಾಹೇಬ್ ಪಾಂಡುರಂಗ ಪಾಟೀಲ್ (ನಿಪ್ಪಾಣಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ ಯಮಗರ್ಣಿ ಗ್ರಾಮ ಪಂಚಾಯಿತಿಯ ನಾಗನೂರು ಗ್ರಾಮದಲ್ಲಿ 2009–10ನೇ ಸಾಲಿನಲ್ಲಿ ಎನ್.ಆರ್.ಇ.ಜಿ.ಎ ಯೋಜನೆಯ ಆಪಾದನೀಯ ಅನುಷ್ಠಾನದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಅಕ್ರಮಗಳು ಮತ್ತು ನಿಧಿಗಳ ದುರ್ಬಳಕೆ ಮತ್ತು ಸಾರ್ವಜನಿಕರ ಹಣ ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸಾರ್ವಜನಿಕರು ನೀಡಿರುವ ದೂರಿನ ಮೇರೆಗೆ, ಕರ್ನಾಟಕ ಲೋಕಾಯುಕ್ತದವರು ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿರುತ್ತಾರೆ;

ಇ) ಸಾರ್ವಜನಿಕರು ನೀಡಿರುವ ದೂರಿನ ಮೇರೆಗೆ ಕರ್ನಾಟಕ ಲೋಕಾಯುಕ್ತದವರು ಯಮಗರ್ಣಿಯ ಗ್ರಾಮ ಪಂಚಾಯಿತಿಗೆ ದಿನಾಂಕ 19 ಮತ್ತು 20ನೇ ಏಪ್ರಿಲ್, 2011ರಂದು ಭೇಟಿ ನೀಡಿ ನಾಗನೂರು ಗ್ರಾಮದಲ್ಲಿ ಎನ್.ಆರ್.ಇ.ಜಿ.ಎ ಯೋಜನೆಯಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ತಪಾಸಣೆ ನಡೆಸಿದ್ದಾರೆಯೇ;

ಈ) ಈ ಬಗ್ಗೆ ಕರ್ನಾಟಕ ಲೋಕಾಯುಕ್ತ ಮತ್ತು ಸರ್ಕಾರವು ಕ್ರಮ ಕೈಗೊಂಡಿದೆಯೇ;

ಉ) ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ ಯಮಗರ್ಣಿ ಗ್ರಾಮ ಪಂಚಾಯಿತಿಯ ನಾಗನೂರು ಗ್ರಾಮದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದಲ್ಲಿ ಹಣ ದುರುಪಯೋಗವಾಗಿರುವ ವಿಚಾರದಲ್ಲಿ ಲೋಕಾಯುಕ್ತ ತನಿಖೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಯಮಗರ್ಣಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿರುತ್ತಾರೆ.

ಇ) ತಪಾಸಣೆ ಮಾಡಿದ್ದಾರೆ.

ಈ) ಕರ್ನಾಟಕ ಲೋಕಾಯುಕ್ತ ಅವರು ಸೂಕ್ತ ದಾಖಲೆಗಳನ್ನು ನೀಡುವಂತೆ ನಿರ್ದೇಶನ ನೀಡಿದ ಮೇರೆಗೆ ದಿನಾಂಕ: 02.09.2011ರಂದು ಸಂಬಂಧಿಸಿದ ಸೂಕ್ತ ದಾಖಲೆಗಳನ್ನು ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯಿತಿ ಚಿಕ್ಕೋಡಿಯವರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಗೆ ಕಳುಹಿಸಿಕೊಟ್ಟಿರುತ್ತಾರೆ. ಇದಲ್ಲದೇ ಬೆಳಗಾವಿ ಜಿಲ್ಲೆಗೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ನೇಮಕಾತಿಯಾದ ಒಂಬುಡ್ಸಮನ್‌ರವರ ಮುಂದೆ ಸಹ ಸದರಿ ದೂರು ವಿಚಾರಣಾ ಹಂತದಲ್ಲಿ ಇರುತ್ತದೆ. ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಂದ ವಿಚಾರಣಾ ವರದಿ ಬಂದ ನಂತರ ನಿಯಮಾನುಸಾರ ಸರ್ಕಾರವು ಮುಂದಿನ ಅಗತ್ಯ ಕ್ರಮ ಜರುಗಿಸಲಾಗುವುದು.

ಉ) ಸದರಿ ದೂರು ವಿಚಾರಣಾ ಹಂತದಲ್ಲಿರುತ್ತದೆ.

ಮಂಗಳೂರಿನಲ್ಲಿ ಹೊಸ ಪ್ರಥಮ ದರ್ಜೆ ಕಾಲೇಜು ಸ್ಥಾಪನೆ

711 (1088) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 3 ವರ್ಷಗಳಲ್ಲಿ ಸರ್ಕಾರ ಎಷ್ಟು ಪ್ರಥಮದರ್ಜೆ ಕಾಲೇಜು ಪ್ರಾರಂಭಿಸಿದೆ; (ಕ್ಷೇತ್ರವಾರು ವಿವರ ನೀಡುವುದು)

ಆ) ಹೊಸದಾಗಿ ಸ್ಥಾಪಿತವಾದ ಕಾಲೇಜುಗಳಲ್ಲಿ ಉಪನ್ಯಾಸಕರ ಮತ್ತು ಮೂಲಭೂತ ಸೌಲಭ್ಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ಉಪನ್ಯಾಸಕರ ಹುದ್ದೆಭರ್ತಿ ಮಾಡಲು ಮತ್ತು ಮೂಲಭೂತ ಸೌಲಭ್ಯ ಕಲ್ಪಿಸಲು ಯಾವ ಕ್ರಮ ಕೈಗೊಂಡಿದೆ;

ಈ) ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೊಸದಾಗಿ ಪ್ರಥಮದರ್ಜೆ ಕಾಲೇಜು ಸ್ಥಾಪನೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೊಸದಾಗಿ ಪ್ರಥಮದರ್ಜೆ ಕಾಲೇಜು ಸ್ಥಾಪಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು;